ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಸರ್ಕಾರ ಗಣಿ ಬಾಧಿತ ರಸ್ತೆಗಳು ಮತ್ತು ಪ್ರದೇಶಗಳ ಅಭಿವೃದ್ಧಿ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

166(73) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯಲ್ಲಿ ಗಣಿಗಾರಿಕೆ ಮಾಡಲು ಸರ್ಕಾರದಿಂದ ಎಷ್ಟು ಗಣಿ ಪ್ರದೇಶಗಳನ್ನು ಗುರುತಿಸಿದೆ. ಅವು ಯಾವುವು; ಈ ಪ್ರದೇಶಗಳಲ್ಲಿ ಗಣಿಗಾರಿಕೆ ಮಾಡಲು ಯಾವ ಯಾವ ಕ್ರಷರ್‌ಗಳಿಗೆ ಎಷ್ಟು ವರ್ಷಗಳಿಂದ ಪರವಾನಿಗೆ ನೀಡಲಾಗಿದೆ ; ಹಾಗೂ ಈ ಪರವಾನಿಗೆ ಇನ್ನೂ ಎಷ್ಟು ಕಾಲಾವಧಿ ಇರುತ್ತದೆ ; (ಈ ಕ್ರಷರ್‌ಗಳ ಮಾಲೀಕರು ಮತ್ತು ಅವರ ವಿಳಾಸ ನೀಡುವುದು)

(ಆ) ಸರ್ಕಾರ ಗಣಿ ಬಾಧಿತ ರಸ್ತೆಗಳು ಮತ್ತು ಪ್ರದೇಶಗಳ ಅಭಿವೃದ್ಧಿಗೆ ಯಾವ ಯೋಜನೆ ರೂಪಿಸಿದೆ ;

(ಇ) ಕಳೆದ ಮೂರು ವರ್ಷಗಳಿಂದ ಯಾವ ಯಾವ ಗಣಿ ಬಾಧಿತ ರಸ್ತೆಗಳನ್ನು ಮತ್ತು ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಎಷ್ಟು ಅನುದಾನ ನೀಡಲಾಗಿದೆ ;

(ಈ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಗಣಿ ಬಾಧಿತ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಅನುದಾನ ನೀಡಲಾಗಿದೆಯೇ ;

(ಉ) ನೀಡಿದ್ದಲ್ಲಿ, ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಯಾವ ಯಾವ ರಸ್ತೆಗಳನ್ನು ಅನುದಾನ ನೀಡಿ ಅಭಿವೃದ್ಧಿಗೊಳಿಸಲಾಗಿದೆ? (ತಾಲ್ಲೂಕುವಾರು ಹಂಚಿಕೆ ಅನುದಾನದ ಮಾಹಿತಿ ನೀಡುವುದು)